ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ. ಯವರ ನ್ಯಾಯಾಲಯ , ಕುಂದಾಪುರ
ಸಿ.ಸಿ. ನಂಬ್ರ: 1726/2016

ಚಾಸಾ:11 ಪ್ರಾಸಾ: 3

ದಿನಾಂಕ: 10.12.2025

| | | |
|---|---|---|
| ವಾಗ್ಮೂಲದವರ ಹೆಸರು | : | ಶ್ರೀ ಡಾ. ದಿನೇಶ್ ಕುಮಾರ್ ಶೆಟ್ಟಿ |
| ತಂದೆಯ ಹೆಸರು | : | ಜಗನ್ನಾಥ ಶೆಟ್ಟಿ |
| ವಯಸ್ಸು | : | 56 ವರ್ಷ |
| ಉದ್ಯೋಗ | : | ವೈದ್ಯಾಧಿಕಾರಿ |
| ವಾಸ ಸ್ಥಳ | : | ಕುಂದಾಪುರ |

ಸಾಕ್ಷಿಯನ್ನು ಪ್ರಮಾಣೀಕರಿಸಲಾಯಿತು.

**<u>ಮುಖ್ಯ ವಿಚಾರಣೆ: ಮಾನ್ಯ ಸ.ಸ.ಅ.ರವರಿಂದ:</u>**

ನಾನು ಕಳೆದ 22 ವರ್ಷಗಳಿಂದ ಕುಂದಾಪುರದ ಚಿನ್ಮಯಿ ಆಸ್ಪತ್ರೆಯಲ್ಲಿ ಮೂಳೆ ತಜ್ಞನಾಗಿ ಕರ್ತವ್ಯ ನಿರ್ವಹಿಸುತ್ತಿದ್ದೇನೆ.

ದಿ: 26-03-2015 ರಂದು ಚಾಸಾ-1ರವರು ಹಲ್ಲೆಯ ಹಿನ್ನೆಲೆಯಲ್ಲಿ ನಮ್ಮ ಆಸ್ಪತ್ರೆಗೆ ಚಿಕಿತ್ಸೆಗಾಗಿ ಬಂದಿದ್ದು, ಅವರನ್ನು ಪರೀಕ್ಷಿಸಲಾಗಿ ಈ ಕೆಳಕಂಡ ಗಾಯಗಳು ಕಂಡು ಬಂದಿರುತ್ತವೆ.

1. ಬಲ ತೊಡೆಯ ಮೇಲೆ ರಕ್ತಸ್ರಾವವಾಗಿತ್ತು. 4x2 c.m ನ ತರುಚಿದ ಗಾಯವಾಗಿದ್ದು ಚಲನವಲನ ಕುಂಠಿತವಾಗಿತ್ತು.
2. ಬಲ ಮೊಣಗಂಟಿನ ಮೇಲೆ ಊತ

ದಿ: 26-03-2015 ರಂದು ಚಾಸಾ-3ರವರು ಹಲ್ಲೆಯ ಹಿನ್ನೆಲೆಯಲ್ಲಿ ನಮ್ಮ ಆಸ್ಪತ್ರೆಗೆ ಚಿಕಿತ್ಸೆಗಾಗಿ ಬಂದಿದ್ದು, ಅವರನ್ನು ಪರೀಕ್ಷಿಸಲಾಗಿ ಈ ಕೆಳಕಂಡ ಗಾಯಗಳು ಕಂಡು ಬಂದಿರುತ್ತವೆ.

1. ಬಲಭುಜದ ಮೇಲೆ ಊತ ಇದ್ದು, ಚಲನವಲನ ಕುಂಠಿತವಾಗಿತ್ತು.

ದಿ: 26-03-2015 ರಂದು ಚಾಸಾ-2ರವರು ಹಲ್ಲೆಯ ಹಿನ್ನೆಲೆಯಲ್ಲಿ ನಮ್ಮ ಆಸ್ಪತ್ರೆಗೆ ಚಿಕಿತ್ಸೆಗಾಗಿ ಬಂದಿದ್ದು, ಅವರನ್ನು ಪರೀಕ್ಷಿಸಲಾಗಿ ಈ ಕೆಳಕಂಡ ಗಾಯಗಳು ಕಂಡು ಬಂದಿರುತ್ತವೆ.

1. ಬಲಕೆನ್ನೆಯ ಮೇಲೆ 4x2 c.mನ ಹರಿದ ಗಾಯ ಇದ್ದು ರಕ್ತಸ್ರಾವವಾಗುತ್ತಿತ್ತು.

ದಿಃ 26-03-2015 ರಂದು ಚಾಸಾ-4ರವರು ಹಲ್ಲೆಯ ಹಿನ್ನೆಲೆಯಲ್ಲಿ ನಮ್ಮ ಆಸ್ಪತ್ರೆಗೆ ಚಿಕಿತ್ಸೆಗಾಗಿ ಬಂದಿದ್ದು, ಅವರನ್ನು ಪರೀಕ್ಷಿಸಲಾಗಿ ಈ ಕೆಳಕಂಡ ಗಾಯಗಳು ಕಂಡು ಬಂದಿರುತ್ತವೆ.

1. ಎಡ ಮೊಣಗಂಟಿನ ಮೇಲೆ ರಕ್ತ ಸ್ರಾವ ಮತ್ತು ಊತ ಇದ್ದು, ಚಲನವಲನ ಕುಂಠಿತವಾಗಿತ್ತು.

ಮೇಲೆ ಹೇಳಿದ ಗಾಯಗಳು ಸಾಮಾನ್ಯ ಸ್ವರೂಪದ ಗಾಯಗಳಾಗಿದ್ದು, ಈ ಬಗ್ಗೆ ನಾನು ಗಾಯದ ಪ್ರಮಾಣ ಪತ್ರವನ್ನು ನೀಡಿರುತ್ತೇನೆ. ಸಾಕ್ಷಿ ಸದ್ರಿ ಗಾಯದ ಪ್ರಮಾಣ ಪತ್ರಗಳನ್ನು ಗುರುತಿಸಿದ ಮೇರೆಗೆ ಅವುಗಳನ್ನು ನಿಪಿ- 4 ರಿಂದ 7ಎಂದು, ಸಾಕ್ಷಿಯ ಸಹಿಗಳನ್ನು ನಿಪಿ-4(ಎ) ರಿಂದ 7(ಎ) ಎಂದು ಗುರುತಿಸಲಾಯಿತು.

**ಪಾಟೀ ಸವಾಲುಃ ಆರೋಪಿತರ ಪರ ವಕೀಲರಾದ ಶ್ರೀ ಪಿ ಜೆ ಎಸ್ ರವರಿಂದಃ**

ಗಾಯದ ಪ್ರಮಾಣ ಪತ್ರದಲ್ಲಿ ಯಾರಿಂದ ಹಲ್ಲೆಗೆ ಒಳಗಾಗಿದ್ದು ಎಂಬ ಬಗ್ಗೆ ನಮೂದಿಸಿಲ್ಲ ಎಂದರೆ ಸರಿ. ಸುಮಾರು 5 ನಿಮಿಷಗಳಲ್ಲಿ 4 ಜನರನ್ನು ಪರಿಶೀಲಿಸಿರುತ್ತೇನೆ ಎಂದರೆ ಸರಿ. ಯಾವ ಅಸ್ತ್ರಗಳಿಂದ ಎಲ್ಲಿ ಹಲ್ಲೆ ಮಾಡಲಾಗಿದೆ ಎಂಬ ಬಗ್ಗೆ ನಮೂದು ಇಲ್ಲ ಎಂದರೆ ಸರಿ. ಗಾಯಾಳುಗಳು ಪೊಲೀಸ್ ಸಿಬ್ಬಂದಿಯವರು ಎಂದರೆ ಸರಿ. ಪೊಲೀಸರ ಕೋರಿಕೆ ಮೇರೆಗೆ ಗಾಯದ ಪ್ರಮಾಣ ಪತ್ರಗಳನ್ನು ವಿತರಿಸಿರುತ್ತೇನೆ ಎಂದರೆ ಸರಿಯಲ್ಲ. ದಾಖಲೆಯಲ್ಲಿ ನಮೂದಿಸಿದ ಯಾವುದೇ ಗಾಯಗಳು ಸದ್ರಿ ವ್ಯಕ್ತಿಗಳ ಮೇಲೆ ಸಂಭವಿಸಿರಲಿಲ್ಲ ಎಂದರೆ ಸರಿಯಲ್ಲ.

**ಮರು ವಿಚಾರಣೆಃ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓದಿ ಹೇಳಿ ಕೇಳಿ ಸರಿ ಇದೆ

**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು**
**ಪ್ರ. ದ. ನ್ಯಾ . ದಂ. ಕುಂದಾಪುರ**